ಬೆಂಗಳೂರು
ನಗರ ವಿಶ್ವವಿದ್ಯಾನಿಲಯ
ಆಗು ನೀ ಅನಿಕೇತನ
BE BOUNDLESS
**BENGALURU CITY UNIVERSITY**

**Office of the Registrar(Evaluation), Central College Campus, Dr. B.R AmbedkarVeedhi, Bengaluru – 560 001.E-mail: registrarevlubcu@gmail.com, Ph.No.080-22295559**

ಸಂಖ್ಯೆ:ಬೆಂ.ನ.ವಿ/ಪ.ವಿ/ಫೋ.ಪ್ರ/ಪಿ.ಜಿ /2023-24/134 ದಿನಾಂಕ: 15.09.2023

## ಅಧಿಸೂಚನೆ

ವಿಷಯ: ಸ್ನಾತಕೋತ್ತರ ಕೋರ್ಸುಗಳ ಬೆಸ ಸಂಖ್ಯೆಯ (Odd Semester) ಸೆಮಿಸ್ಟರ್ ಶೈಕ್ಷಣಿಕ ವರ್ಷ 2022-23ರಿಂದ ಪ್ರಾರಂಭವಾಗುವ ವಿದ್ಯಾರ್ಥಿಗಳಿಗೆ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ನೀಡುವ ಬಗ್ಗೆ.
ಉಲ್ಲೇಖ:ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ 29.10.2022 ಹಾಗೂ ದಿನಾಂಕ 16.12.2022.

******

ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಕೆಲವು ಸ್ನಾತಕೋತ್ತರ ಕೋರ್ಸುಗಳ ವಿದ್ಯಾರ್ಥಿಗಳು ಪರೀಕ್ಷೆಗಳ ಫೋಟೋ ಪ್ರತಿಗಳನ್ನು ಒದಗಿಸುವಂತೆ ಕೋರಿ ಮನವಿ ಸಲ್ಲಿಸಿದ್ದರು. ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಫೋಟೋ ಪ್ರತಿಗಳನ್ನು ಒದಗಿಸಲು ಅವಕಾಶ ಇರಲಿಲ್ಲವಾದ ಕಾರಣ, ವಿದ್ಯಾರ್ಥಿಗಳು ವಿಶ್ವವಿದ್ಯಾಲಯವನ್ನು ಫೋಟೋ ಪ್ರತಿ ನೀಡುವಂತೆ ಒತ್ತಾಯಿಸುತ್ತಿದ್ದ ಕಾರಣ, ವಿಷಯವನ್ನು ದಿನಾಂಕ 29.10.2022 ರಂದು ನಡೆದ ವಿದ್ಯಾವಿಷಯಕ ಸಭೆಯ ಮುಂದೆ ಸೂಕ್ತ ನಿರ್ಣಯಕ್ಕಾಗಿ ಮಂಡಿಸಲಾಗಿತ್ತು. ದಿನಾಂಕ 16.12.2022 ರಂದು ನಡೆದ ವಿದ್ಯಾವಿಷಯಕ ಪರಿಷತ್ತಿನ ಸಭೆಯಲ್ಲಿ ಈ ರೀತಿ ನಿರ್ಣಯ ತೆಗೆದುಕೊಂಡಿದೆ.

ಸ್ನಾತಕೋತ್ತರ ಬೆಸ ಸಂಖ್ಯೆಯ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ಒಬ್ಬರು ಮೌಲ್ಯಮಾಪಕರಿಂದ ಮೌಲ್ಯಮಾಪನ ಮಾಡಿಸಿ ಪ್ರಶ್ನೆವಾರು ಅಂಕಗಳನ್ನು ನೀಡುವ ವಿಧಾನವನ್ನು ಅಳವಡಿಸಿಕೊಂಡು ಹಾಗೂ ಪದವಿ ಕೋರ್ಸಿಗೆ ಅನ್ವಯವಾಗುವ ಶುಲ್ಕವನ್ನು ಪಡೆದು ಅಂತಹ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಳನ್ನು ನೀಡಲು ಹಾಗೂ ಮರು ಮೌಲ್ಯಮಾಪನಕ್ಕೆ ವಿಶ್ವವಿದ್ಯಾನಿಲಯದ ನಿಯಮಾನುಸಾರ ಕ್ರಮವಹಿಸಲು ಸಭೆ ಒಪ್ಪಿಗೆ ನೀಡಿತು.

ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಿರ್ಣಯದಂತೆ ತಕ್ಷಣದಿಂದ ಜಾರಿಗೆ ಬರುವಂತೆ ಇನ್ನು ಮುಂದೆ ನಡೆಯುವ ಸ್ನಾತಕೋತ್ತರ ಕೋರ್ಸುಗಳ ಬೆಸ ಸಂಖ್ಯೆ ಸೆಮಿಸ್ಟರ್ (Odd Semester) ಪರೀಕ್ಷೆಗಳ ಫಲಿತಾಂಶ ಪ್ರಕಟಿಸಿದ ನಂತರ ವಿದ್ಯಾರ್ಥಿಗಳು ಬಯಸಿದಲ್ಲಿ ವಿಶ್ವವಿದ್ಯಾಲಯ ನಿಗದಿಪಡಿಸಿದ ಶುಲ್ಕ ಪಾವತಿಸಿ, ವಿಶ್ವವಿದ್ಯಾಲಯ ನಿಗದಿಪಡಿಸಿದ ಅವಧಿಯಲ್ಲಿ ಮಾತ್ರ ನಿಯಮದಂತೆ ಅರ್ಜಿ ಸಲ್ಲಿಸಿ ಉತ್ತರ ಪತ್ರಿಕೆಗಳ ಫೋಟೋ ಪ್ರತಿಯನ್ನು ಪಡೆಯಬಹುದಾಗಿದೆ.

ಕುಲಸಚಿವರು(ಮೌಲ್ಯಮಾಪನ)
ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು – 560 001

ಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರುಗಳಿಗೆ, ಬೆಂಗಳೂರು ನಗರ ವಿಶ್ವವಿದ್ಯಾಲಯ.
2. ಸ್ನಾತಕೋತ್ತರ ಕೋರ್ಸುಗಳನ್ನು ಹೊಂದಿರುವ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡಿರುವ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
3. ಕುಲಪತಿಗಳು/ಕುಲಸಚಿವರು(ಆ)/ವಿತ್ತಾಧಿಕಾರಿಗಳು/ಅವರ ಆಪ್ತಕಾರ್ಯದರ್ಶಿಗಳಿಗೆ ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.